**Bangalore**
**Regional News**
**04.05.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಹಾವೇರಿಯಲ್ಲಿ ೬೫೦ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಯೋಜನೆ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ನಾಳೆ ಶಿರಸಿಗೆ ಭೇಟಿ
3. ರಾಜ್ಯದ ಪರೀಕ್ಷಾ ಕೇಂದ್ರಗಳಲ್ಲಿ ಸುಗಮವಾಗಿ ನಡೆದ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ-ನೀಟ್
4. ರಾಜ್ಯದ್ಯಾಂತ ಶ್ರೀ ಮಹರ್ಷಿ ಭಗೀರಥ ಜಯಂತಿ ಆಚರಣೆ

<><><><>

ಹಾವೇರಿ ಜಿಲ್ಲೆ ಸಾಹಿತ್ಯಿಕವಾಗಿ, ಸಾಂಸ್ಕೃತಿಕವಾಗಿ ಮತ್ತು ಅಧ್ಯಾತ್ಮಿಕವಾಗಿ ಶ್ರೇಷ್ಠತೆ ಪಡೆದಿರುವ ಜಿಲ್ಲೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹಾವೇರಿಯಲ್ಲಿ ಇಂದು ೬೫೦ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಕಾರ್ಯಗಳನ್ನು ಲೋಕಾರ್ಪಣೆಗೊಳಿಸಿ, ನೂತನ ಯೋಜನೆಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಜನರಿಗೆ ಕೊಟ್ಟ ಮಾತಿನಂತೆ ಐದೂ ಗ್ಯಾರಂಟಿಗಳನ್ನೂ ಜಾರಿಗೊಳಿಸಲಾಗಿದೆ ಎಂದರು. ಕಳೆದ ವರ್ಷದ ಬಜೆಟ್ ಗಾತ್ರಕ್ಕಿಂತ ಈ ಬಾರಿಯ ಬಜೆಟ್ ಗಾತ್ರ ೩೮ ಸಾವಿರ ಕೋಟಿ ರೂಪಾಯಿಗಳಷ್ಟು ಹೆಚ್ಚಾಗಿದೆ. ಈ ಬಾರಿ ಬಂಡವಾಳ ವೆಚ್ಚ ೮೩ ಸಾವಿರ ಕೋಟಿ ರೂಪಾಯಿ ತೆಗೆದಿರಿಸಲಾಗಿದೆ. ಬಂಡವಾಳ ವೆಚ್ಚ ಕಳೆದ ವರ್ಷಕ್ಕಿಂತ ೩೧ ಸಾವಿರ ಕೋಟಿ ಹೆಚ್ಚಾಗಿದೆ. ಇದಲ್ಲದೆ ಹೆಚ್ಚುವರಿವಾಗಿ ೫೦ ಸಾವಿರ ಕೋಟಿ ರೂಪಾಯಿಗಳನ್ನು ಗ್ಯಾರಂಟಿ ಯೋಜನೆಗಳಿಗೆ ತೆಗೆದಿಡಲಾಗಿದೆ. ಒಟ್ಟು ಒಂದು ಲಕ್ಷದ ೩೩ ಸಾವಿರ ಕೋಟಿ ರೂಪಾಯಿಯನ್ನು ಅಭಿವೃದ್ಧಿ ಕಾರ್ಯಗಳಿಗೆ ಮೀಸಲಿರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ ನೀಡಿದ್ದಾರೆ.

<><><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ನಾಳೆ ಕರ್ನಾಟಕಕ್ಕೆ ಒಂದು ದಿನದ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿರುವ ಅರಣ್ಯ ಕಾಲೇಜಿಗೆ ಭೇಟಿ ನೀಡಲಿದ್ದಾರೆ.

<><><><>

ದೇಶದ ಐದು ಸಾವಿರಕ್ಕೂ ಹೆಚ್ಚು ಕೇಂದ್ರಗಳಲ್ಲಿ ಮತ್ತು ವಿದೇಶಗಳ ೧೩ ನಗರಗಳಲ್ಲಿ ಇಂದು ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ- ನೀಟ್ ಯುಜಿ -೨೦೨೫ ಸುಗಮವಾಗಿ ಜರುಗಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಾಲ್ಕು ಪರೀಕ್ಷಾ ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ನಡೆಯಿತು. ಜಿಲ್ಲೆಯ ೪ ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು ೨೦೪೦ ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದರು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿತ್ತು. ಪ್ರತಿ ವಿದ್ಯಾರ್ಥಿಗಳ ಪ್ರವೇಶ ಪತ್ರ, ವಸ್ತ್ರ ಸಂಹಿತೆ, ಪರೀಕ್ಷಾ ನಿಯಮಗಳನ್ನು ಪಾಲಿಸುವ ಕುರಿತು ಪರಿಶೀಲನೆ ನಡೆಸಿ, ತಪಾಸಣೆ ಮಾಡಿ ಒಳ ಬಿಡಲಾಯಿತು. ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿತ್ತು. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯುತ್ ವ್ಯವಸ್ಥೆ, ಸಿ.ಸಿ ಕ್ಯಾಮೆರಾ ಅಳವಡಿಕೆ, ಆಂಬುಲೆನ್ಸ್ ಸೇವೆ , ಆರೋಗ್ಯಘಟಕ, ವ್ಯವಸ್ಥೆಗಳನ್ನು ಕಲ್ಪಿಸಲಾಗಿತ್ತು. ಚಿತ್ರದುರ್ಗದಲ್ಲಿ ಜರುಗಿದ ನೀಟ್ ಪರೀಕ್ಷೆ ಸುಗಮವಾಗಿ

ಜರುಗಿದ್ದು, ಒಟ್ಟು ೧೪೧ ವಿದ್ಯಾರ್ಥಿಗಳು ಗೈರಾಗಿದ್ದಾರೆ. ನೀಟ್ ಪರೀಕ್ಷೆಗಾಗಿ ಜಿಲ್ಲೆಯಲ್ಲಿ ಒಟ್ಟು ೦೭ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿತ್ತು. ೩ ಸಾವಿರದ ೧೯ ವಿದ್ಯಾರ್ಥಿಗಳ ಪೈಕಿ ೨೮೭೮ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ, ೧೪೧ ವಿದ್ಯಾರ್ಥಿಗಳು ಪರೀಕ್ಷೆಗೆ ಗೈರು ಹಾಜರಾಗಿದ್ದಾರೆ. ಜಿಲ್ಲೆಯಲ್ಲಿ ಭಾನುವಾರ ಜರುಗಿದ ನೀಟ್ ಪರೀಕ್ಷೆ ಕಾರ್ಯಗಳ ಕುರಿತಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಎಲ್ಲ ೦೭ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರೀಕ್ಷಾ ಪ್ರಕ್ರಿಯೆಗಳ ಬಗ್ಗೆ ಪರಿಶೀಲನೆ ನಡೆಸಿದರು. ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಅನುವಾಗುವಂತೆ ಪರೀಕ್ಷಾ ಕೇಂದ್ರದ ಸುತ್ತ ೨೦೦ ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ, ಪೊಲೀಸ್ ಬಂದೋಬಸ್ತ್ ಕಾರ್ಯ ಕೈಗೊಳ್ಳಲಾಗಿತ್ತು.

<><><><>

ರಾಜ್ಯದ ವಿವಿಧೆಡೆ ಇಂದು ಮಹರ್ಷಿ ಶ್ರೀ ಭಗೀರಥ ಜಯಂತಿಯನ್ನು ಆಚರಿಸಲಾಯಿತು. ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಭವನದಲ್ಲಿ ಇಂದು ಶ್ರೀ ಭಗೀರಥ ಜಯಂತಿ ಆಚರಿಸಲಾಯಿತು. ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಮಹರ್ಷಿ ಭಗೀರಥರು ತಮ್ಮ ಅಪಾರ ಪರಿಶ್ರಮದಿಂದ ಭೂಮಿಗೆ ಗಂಗೆಯ ನೀರನ್ನು ತಂದಂತಹ ಮಹಾನ್ ಸಾಧನೆ ಮಾಡಿದ್ದಾರೆ. ಪ್ರಯತ್ನವೇ ಯಶಸ್ಸಿಗೆ ದಾರಿ ಎಂಬುದನ್ನು ಅವರು ಸಾಬೀತುಪಡಿಸಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ಉಪಸ್ಥಿತರಿದ್ದರು. ಶ್ರೀ ಭಗೀರಥರು ತಮ್ಮ ಕಠಿಣ ತಪ್ಪಸ್ಸಿನ ಮೂಲಕ ಗಂಗೆಯನ್ನು ಧರೆಗೆ ಇಳಿಸಿದ ಅವರ ಛಲ ಹಾಗೂ ದೃಢ ಸಂಕಲ್ಪದ ಮೂಲಕ ಕಠಿಣ ಕಾರ್ಯ, ಸಹನೆ, ದೃಢ ನಿಶ್ಚಯದಂತಹ ಅವರ ಜೀವನಾದರ್ಶದ ವಿಚಾರಗಳು ಮಾನವ ಜನಾಂಗಕ್ಕೆ ಪ್ರೇರಣಾದಾಯಕವಾಗಿದೆ ಎಂದು ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಹೇಳಿದರು. ವಿಜಯಪುರದಲ್ಲಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಗುರಿ ಸಾಧನೆಯಲ್ಲಿ ಬರುವ ಅಡೆ-ತಡೆಗಳಿಗೆ ಹಿಂಜರಿಯದೇ, ದೃಢ ನಿಶ್ಚಯದ ಮೂಲಕ ಕಠಿಣ ಪರಿಶ್ರಮ ಹಾಗೂ ಶ್ರದ್ಧೆಯಿಂದ ಗುರಿ ಸಾಧಿಸಬಹುದು ಎಂದರು. ಭಗೀರಥರ ಜೀವನ ತತ್ವಾದರ್ಶ, ಅವರ ಜೀವನ ಚರಿತ್ರೆ ಇಂದಿನ ಯುವಕರು ತಿಳಿದುಕೊಳ್ಳಬೇಕು. ಸತ್ಪುರುಷರು, ದಾರ್ಶನಿಕರು ನಡೆದು ಬಂದ ದಾರಿ, ಅವರು ನೀಡಿದ ಸಂದೇಶ, ಅವರ ವಿಚಾರಧಾರೆಗಳನ್ನು ಮೈಗೂಡಿಸಿಕೊಳ್ಳುವ ಮೂಲಕ ಜೀವನವನ್ನು ಸುಂದರವಾಗಿಸಿಕೊಳ್ಳೋಣ ಎಂದು ಹೇಳಿದರು. ಉಪನ್ಯಾಸಕಿ ಸರಸ್ವತಿ ಚಿಮ್ಮಲಗಿ ಮಾತನಾಡಿ, ಭಗೀರಥರು ಕಠಿಣ ತಪಸ್ಸಿನ ಮೂಲಕ ಗಂಗಾ ಮಾತೆಯನ್ನು ಧರೆಗಿಳಿಸಿದವರು. ದೃಢ ಸಂಕಲ್ಪದಿಂದ ಎಂತಹ ಅಸಾಧ್ಯವಾದದ್ದನ್ನು ಸಾಧ್ಯವಾಗಿಸಬಹುದೆಂಬ ಸಂದೇಶವನ್ನು ಶ್ರೀ ಭಗೀರಥರು ಜಗತ್ತಿಗೆ ನೀಡಿದ್ದಾರೆ. ಭಗೀರಥರ ಜೀವನಗಾಥೆ ಅತ್ಯಂತ ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ಮಹರ್ಷಿ ಭಗೀರಥ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು, ಭಗೀರಥರ ಚಿತ್ರಪಟಕ್ಕೆ ಪುಷ್ಪ ನಮನ ಸಲ್ಲಿಸಿದರು. ನಂತರ ಮಾತನಾಡಿದ ಅವರು, ಭಗೀರಥ ಮಹರ್ಷಿಯು ತನ್ನ ಘೋರ ತಪಸ್ಸಿನಿಂದ ಗಂಗೆಯನ್ನು ಭುವಿಗೆ ತಂದ ಮಹಾನ್ ಸಾಧಕರು ಎಂದು ಹೇಳಿದರು. ಯಾವುದೇ ಕಾರ್ಯ, ಛಲ ಬಿಡದೇ ಮಾಡುವ ಹುಮ್ಮಸ್ಸಿಗೆ ಭಗೀರಥರು ಪ್ರೇರಣೆಯಾಗಿದ್ದಾರೆ. ಲೋಕಕಲ್ಯಾಣಾಕ್ಕಾಗಿ ತಮ್ಮ ಜೀವನವನ್ನು ಮುಡುಪಾಗಿಟ್ಟ ಇಂತಹ ಮಹಾನ್ ಸಾಧಕರನ್ನು ಸ್ಮರಿಸಬೇಕಿದೆ ಎಂದರು. ನಾಡು ಕಂಡ ಮಹನೀಯರಲ್ಲಿ ಒಬ್ಬರಾದ ಭಗೀರಥರ ತತ್ವ, ಸಿದ್ಧಾಂತ, ಮೌಲ್ಯ ಆದರ್ಶಗಳನ್ನು ಸಮಾಜ

ಅನುಸರಿಸಬೇಕು ಎಂದು ಮಂಡ್ಯ ತಹಸೀಲ್ದಾರ್ ಶಿವಕುಮಾರ್ ಬಿರಾದರ್ ಹೇಳಿದ್ದಾರೆ. ಮಂಡ್ಯ ನಗರದ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಗೀರಥ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಏಕಾಗ್ರತೆ ಮತ್ತು ದೃಢತೆ ಭಗೀರಥ ಮಹರ್ಷಿಗಳಿಗೆ ಅಗಾಧವಾಗಿತ್ತು ಎಂದರು. ತಮ್ಮ ಪ್ರಯತ್ನದ ಮೂಲಕ ಗಂಗೆಯನ್ನು ಭೂಮಿಗೆ ಕರೆತಂದವರು ಭಗೀರಥರು ಎಂದು ಮಂಡ್ಯ ಶಾಸಕ ಕೆ. ಹರೀಶ್ ಗೌಡ  ಹೇಳಿದರು. ಮಂಡ್ಯ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ಶ್ರೀ ಭಗೀರಥ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ ಮಾತನಾಡಿ, ಯಾವುದೇ ವ್ಯಕ್ತಿಯಾದರೂ ಸಾಧನೆ ಮಾಡಬೇಕೆಂದರೆ ಶ್ರಮ ಮತ್ತು ಪರಿಶ್ರಮ ಮುಖ್ಯ. ಗಂಗೆಯನ್ನು ಭೂಮಿಗೆ ಕರೆತರಲು ಭಗೀರಥರ ಪ್ರಯತ್ನ ಅಪಾರವಾದದ್ದು ಎಂದರು. ಶ್ರೀ ಭಗೀರಥ ಮಹರ್ಷಿ ತಮ್ಮ ಕಠಿಣ ತಪಸ್ಸಿನ ಮೂಲಕ ಗಂಗೆಯನ್ನು ಧರೆಗೆ ಇಳಿಸಿದ ಮಹಾನ್ ದಾರ್ಶನಿಕರು. ಭಗೀರಥರ ಜೀವನ ತತ್ವಾದರ್ಶ, ಅವರ ವಿಚಾರಧಾರೆಗಳನ್ನು ಇಂದಿನ ಯುವಕರು ಅಳವಡಿಸಿಕೊಳ್ಳಬೇಕಿದೆ ಎಂದು ತಹಸೀಲ್ದಾರ್ ಡಾ.ನಯನ ಹೇಳಿದ್ದಾರೆ. ಕೋಲಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ  ಸಂಯುಕ್ತಾ ಶ್ರಯದಲ್ಲಿ ಟಿ. ಚೆನ್ನಯ್ಯ ರಂಗಮಂದಿರದಲ್ಲಿ ಆಯೋಜಿಸಿದ್ದ ಶ್ರೀ ಭಗೀರಥ ಜಯಂತಿಯನ್ನು  ಉದ್ಘಾಟಿಸಿ ಅವರು ಮಾತನಾಡಿದರು.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿ ಹಾಗೂ ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆ ಪ್ರಕಣಗಳನ್ನು ಖಂಡಿಸಿ, ನಾಳೆ ಸೋಮವಾರ ಚಿಕ್ಕಮಗಳೂರು ಜಿಲ್ಲಾ ಬಂದ್‌ಗೆ ವಿವಿಧ ಸಂಘಟನೆಗಳು ಕರೆ ನೀಡಿವೆ. ನಾಳೆ ಬೆಳಗ್ಗೆ ೮ ರಿಂದ ಸಂಜೆ ೫ ಗಂಟೆವರೆಗೆ ಎಲ್ಲಾ ಅಂಗಡಿ, ಮುಂಗಟ್ಟುಗಳನ್ನು ಮುಚ್ಚಿ, ಬಂದ್‌ಗೆ ಬೆಂಬಲ ಸೂಚಿಸುವಂತೆ ಭಜರಂಗದಳ ಮನವಿ ಮಾಡಿದೆ.

<><><>

ಮಾಗಡಿ ವಿಧಾನಸಭಾ ಕ್ಷೇತ್ರದ ಕಸಬಾ ಹೋಬಳಿಯ ಬ್ಯಾಲಕೆರೆ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಮಹಾ ಶರಣೆ ಶ್ರೀ ಹೊನ್ನಾದೇವಿ ಅಮ್ಮನವರ ದೇವಾಲಯದ ರಾಜಗೋಪುರ ಕಳಶಗಳ ಸ್ಥಾಪನೆ, ಕುಂಭಾಭಿಷೇಕ ಹಾಗೂ ಉದ್ಘಾಟನೆಯನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಸಂಸದ ಡಾ. ಸಿ ಎನ್ ಮಂಜುನಾಥ್ ನೆರವೇರಿಸಿದರು. ನಂತರ ಮಾತನಾಡಿದ ಅವರು, ಸಮಾಜದ ಗುರುವಾಗಿ ಶ್ರೀಮಠಗಳು ಕೆಲಸ ಮಾಡುತ್ತಿವೆ. ಸಮಾಜವನ್ನು ಸರಿಯಾದ ದಾರಿಯಲ್ಲಿ ಕರೆದುಕೊಂಡು ಹೋಗುವ ಕೆಲಸ ಮಠಾಧೀಶರು ಮಾಡುತ್ತಿದ್ದಾರೆ. ಸಮಾಜದ ಅಭಿವೃದ್ಧಿಯಲ್ಲಿ ಮಠ-ಮಾನ್ಯಗಳ ಪಾತ್ರ ಪ್ರಮುಖವಾದುದು. ಮಠಗಳು ಅಕ್ಷರ, ಅನ್ನ ದಾಸೋಹ ಮೂಲಕ ಸಮಾಜವನ್ನು ಮುನ್ನಡೆಸಿಕೊಂಡು ಬಂದಿವೆ ಎಂದು ಹೇಳಿದರು.

<><><>

ಬಹುಜನ ಹಿತಾಯ ಬಹು ಜನ ಸುಖಾಯ ಎಂಬ ಧ್ಯೇಯ ವಾಕ್ಯದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಚಿತ್ರದುರ್ಗದ ಕೆಳಕೋಟೆ ಆಕಾಶವಾಣಿ ಕೇಂದ್ರಕ್ಕೆ ಈಗ ೩೫ ವರ್ಷಗಳ ಸಂಭ್ರಮ. ೧೯೯೧ ಮೇ ೩ರಂದು ಆರಂಭವಾದ ಆಕಾಶವಾಣಿ ಕೇಂದ್ರ ನಿರಂತರವಾಗಿ ಶಿಕ್ಷಣ, ಮಾಹಿತಿ, ಮನರಂಜನಾ ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಿದೆ. ೩೫ನೇ ವರ್ಷಕ್ಕೆ ಪದಾರ್ಪಣೆ ಮಾಡಿರುವ ಸಂದರ್ಭದಲ್ಲಿ ಆಕಾಶವಾಣಿ ಕೇಂದ್ರಕ್ಕೆ ಚಿತ್ರದುರ್ಗ ಉಸ್ತುವಾರಿ ಸಚಿವ ಎಂ.ಸುಧಾಕರ್,  ಸಂಸದ ಗೋವಿಂದ ಎಂ ಕಾರಜೋಳ, ಸಾಹಿತಿ ಡಾ.ಬಿ ಎಲ್ ವೇಣು ಸೇರಿದಂತೆ ಮತ್ತಿತರ ಗಣ್ಯರು ಭೇಟಿ ನೀಡಿ ಸಿಬ್ಬಂದಿ ವರ್ಗಕ್ಕೆ ಶುಭ ಹಾರೈಸಿದರು. ಬಳಿಕ ಮಾತನಾಡಿದ ಸಂಸದ ಗೋವಿಂದ

ಕಾರಜೋಳ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಾಯೋಜಿತ ಕಾರ್ಯಕ್ರಮಗಳನ್ನು, ಸರ್ಕಾರದ ವಿವಿಧ ಯೋಜನೆಗಳನ್ನು ಜನರಿಗೆ ಮುಟ್ಟಿಸುವಲ್ಲಿ ಆಕಾಶವಾಣಿ ಯಶಸ್ವಿಯಾಗಿದೆ. ಪ್ರಸಾರವಾಗುವ ಸಂದರ್ಶನ, ನಾಟಕ, ರೂಪಕಗಳು ನೈತಿಕ ಮೌಲ್ಯಗಳನ್ನು ಬಿತ್ತುವಲ್ಲಿ ಸಹಕಾರಿಯಾಗಿದೆ. ಆಕಾಶವಾಣಿಯಲ್ಲಿ ಪ್ರಸಾರವಾಗುವ ಪ್ರಧಾನಿ ಅವರ 'ಮನ್ ಕೀ ಬಾತ್' ವಿಶ್ವದಾದ್ಯಂತ ಜನರನ್ನು ಆಕರ್ಷಿಸುತ್ತಿದೆ ಎಂದು ಹೇಳಿದರು.

<><><><>

ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ-೨೦೨೫ ಕ್ಕೆ ಸಂಬಂಧಿಸಿದಂತೆ ದತ್ತಾಂಶಗಳನ್ನು ಶೇಖರಿಸಲು ಪರಿಶಿಷ್ಟ ಜಾತಿ ಒಳಮೀಸಲಾತಿ ಸಮೀಕ್ಷೆ ಕಾರ್ಯವನ್ನು ಕೈಗೊಂಡಿದ್ದು, ನಾಳೆಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಮೀಕ್ಷೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಈ ಸಮೀಕ್ಷೆ ಕಾರ್ಯಕ್ಕೆ ಪ್ರತಿ ಮತಗಟ್ಟೆಗೆ ಒಬ್ಬರಂತೆ ಗಣತಿದಾರರು, ಪ್ರತಿ ೧೦ ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>